ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

20

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 17/2/21

## ನ್ಯಾಯಾಂಗದ ಘನತೆ ಎತ್ತಿ ಹಿಡಿದಿದ್ದ ಧೀಮಂತ

# ನ್ಯಾ.ರಾಮಾ ಜೋಯಿಸ್ ಇನ್ನಿಲ್ಲ

17/2/21

▪ **ವಿಕ ಸುದ್ದಿಲೋಕ** ಬೆಂಗಳೂರು

ದೇಶದ ನ್ಯಾಯಾಂಗ ಹಾಗೂ ಶಾಸಕಾಂಗದಲ್ಲಿ ಸಕ್ರಿಯರಾಗಿದ್ದ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹಾಗೂ ಮಾಜಿ ರಾಜ್ಯಪಾಲ ರಾಮಾ ಜೋಯಿಸ್ (89) ಮಂಗಳವಾರ ಬೆಳಗ್ಗೆ 7.30ಕ್ಕೆ ನಗರದಲ್ಲಿ ನಿಧನರಾದರು.

ವಯೋಸಹಜ ಕಾಯಿಲೆಗಳಿಂದ ಅವರು ಬಳಲುತ್ತಿದ್ದರು. ಸಂಜೆ 5 ಗಂಟೆಗೆ ಚಾಮರಾಜಪೇಟೆಯ ರುದ್ರಭೂಮಿಯಲ್ಲಿ ಅಂತಿಮ ಸಂಸ್ಕಾರ ನೆರವೇರಿತು. ಪತ್ನಿ, ಇಬ್ಬರು ಮಕ್ಕಳು ಮತ್ತು ಮೊಮ್ಮಕ್ಕಳೂ ಸೇರಿದಂತೆ ಅಪಾರ ಬಂಧು-ಬಳಗವನ್ನು ಅವರು ಅಗಲಿದ್ದಾರೆ.

1931ರ ಜುಲೈ 27ರಂದು ಮಂಡಗದ್ದೆ ರಾಮಾ ಜೋಯಿಸ್ ಜನಿಸಿದ್ದರು. 1947ರಲ್ಲಿ ಶಿವಮೊಗ್ಗದಲ್ಲಿ ಎಸ್‌ಎಸ್‌ಎಲ್‌ಸಿ ಮುಗಿಸಿದ ಅವರು, ನಂತರ ಆರ್ಥಿಕ ಸಂಕಷ್ಟದ ಕಾರಣ ಆಗುಂಬೆಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಕೆಲಸಕ್ಕೆ ಸೇರಿಕೊಂಡರು. ಅಲ್ಲಿ ಎರಡು ವರ್ಷ ಕಾರ್ಯನಿರ್ವಹಿಸಿದ ಬಳಿಕ ಹಿರಿಯರ ಸಲಹೆ ಮೇರೆಗೆ ಬಬ್ಬೂರುಕಮ್ಮೆ ವಸತಿ ನಿಲಯ ಸೇರಿ ಪದವಿ ಮುಗಿಸಿದರು. ಬಿ.ಎ. ಹಾಗೂ ಕಾನೂನು ಪದವಿ ಪಡೆದಿದ್ದ ಜೋಯಿಸ್ ಅವರನ್ನು ಕುವೆಂಪು ವಿಶ್ವವಿದ್ಯಾಲಯ 'ಡಾಕ್ಟರ್ ಆಫ್ ಲಾ' ಪದವಿ ನೀಡಿ ಗೌರವಿಸಿತ್ತು. 1992ರಲ್ಲಿ ಹರಿಯಾಣ ಮತ್ತು ಪಂಜಾಬ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಕಾರ್ಯನಿರ್ವಹಿಸಿದ್ದರು. 2002ರಲ್ಲಿ ಜಾರ್ಖಂಡ್ ರಾಜ್ಯಪಾಲರಾಗಿ, 2003ರಲ್ಲಿ ಬಿಹಾರ ರಾಜ್ಯಪಾಲರಾಗಿಯೂ ಸೇವೆ ಸಲ್ಲಿಸಿದ್ದರು. ನಿವೃತ್ತಿ ಬಳಿಕ ಭಾರತೀಯ ಜನತಾ ಪಕ್ಷದಲ್ಲಿ ಗುರುತಿಸಿಕೊಂಡಿದ್ದ ಅವರು, ರಾಜ್ಯಸಭೆ ಸದಸ್ಯರೂ ಆಗಿದ್ದರು.

**ಅಂತಿಮ ನಮನ:** ಸರಕಾರದ ಪ್ರತಿನಿಧಿಗಳಾಗಿ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಸಚಿವರಾದ ಎಸ್. ಸುರೇಶ್ ಕುಮಾರ್, ಕೆ.ಎಸ್. ಈಶ್ವರಪ್ಪ, ಡಾ. ಕೆ. ಸುಧಾಕರ್, ಸಂಸದೆ ಶೋಭಾ ಕರಂದ್ಲಾಜೆ, ವಿಧಾನಸಭೆಯ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ಬಿಜೆಪಿ ರಾಜ್ಯಾಧ್ಯಕ್ಷ ನಳೀನ್‌ಕುಮಾರ್ ಕಟೀಲ್, ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ್ ಶೆಟ್ಟಿ ಅಂತಿಮ ದರ್ಶನ ಪಡೆದರು.

ಡಾ. ಡಿ ವೀರೇಂದ್ರ ಹೆಗ್ಗಡೆ, ಪೇಜಾವರ ಪೀಠದ ವಿಶ್ವಪ್ರಸನ್ನತೀರ್ಥ ಸ್ವಾಮೀಜಿ, ಡಿಸಿಎಂಗಳಾದ ಗೋವಿಂದ ಕಾರಜೋಳ, ಡಾ. ಸಿ.ಎನ್. ಅಶ್ವತ್ಥ ನಾರಾಯಣ, ಸಚಿವ ಈಶ್ವರಪ್ಪ, ಕೇಂದ್ರ ಸಚಿವರಾದ ಡಿ. ವಿ. ಸದಾನಂದ ಗೌಡ, ಪ್ರಹ್ಲಾದ್ ಜೋಶಿ, ಕಾಂಗ್ರೆಸ್ ನಾಯಕ ಆರ್ ವಿ ದೇಶಪಾಂಡೆ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮಾಜಿ ಸಿಎಂ ಕುಮಾರಸ್ವಾಮಿ ಸೇರಿದಂತೆ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.



### ಪ್ರಮುಖ ಪುಸ್ತಕಗಳು

'ಧರ್ಮ ದಿ ಗ್ಲೋಬಲ್ ಎಥಿಕ್', 'ಹಿಸ್ಟಾರಿಕಲ್ ಬ್ಯಾಟಲ್' ಸೇರಿದಂತೆ ಕಾನೂನು ಮತ್ತು ಸಂವಿಧಾನಕ್ಕೆ ಸಂಬಂಧಿಸಿದ ಅನೇಕ ಪುಸ್ತಕಗಳನ್ನು ರಚಿಸಿದ್ದಾರೆ. ತುರ್ತು ಪರಿಸ್ಥಿತಿಯ ಜೈಲುವಾಸಕ್ಕೆ ಸಂಬಂಧಿಸಿ 'ಹಿಸ್ಟಾರಿಕ್ ಲೀಗಲ್ ಬ್ಯಾಟಲ್ ಆಫ್ ಅಟಲ್ ಬಿಹಾರಿ ವಾಜಪೇಯಿ, ಎಲ್.ಕೆ.ಆಡ್ವಾಣಿ, ಶ್ಯಾಮನಂದನ್ ಮಿಶ್ರಾ, ಮಧು ದಂಡವತೆ' ಎಂಬ ಕೃತಿಯನ್ನೂ ರಚಿಸಿದ್ದಾರೆ.

**ನಿವೃತ್ತ ನ್ಯಾ. ರಾಮಾ ಜೋಯಿಸ್ ನಿಧನರಾದ ಸುದ್ದಿ ಅತೀವ ದುಃಖ ತಂದಿದೆ. ರಾಜ್ಯಪಾಲರಾಗಿ, ರಾಜ್ಯಸಭೆ ಸದಸ್ಯರಾಗಿಯೂ ಅವರು ಅನುಪಮ ಸೇವೆ ಸಲ್ಲಿಸಿದ್ದರು. ಅವರ ಆತ್ಮಕ್ಕೆ ಸದ್ಗತಿ ಕೋರುವೆ.**

**- ಬಿ.ಎಸ್.ಯಡಿಯೂರಪ್ಪ** ಸಿಎಂ